## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆರಹಿತ ಪ್ರಶ್ನೆ ಸಂಖ್ಯೆ | :824(785) |
| ಮಾನ್ಯ ಸದಸ್ಯರ ಹೆಸರು | :ಶ್ರೀ ಶಶಿಲ್ ಜಿ ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | :24-08-2026 |
| ಉತ್ತರಿಸುವ ಸಚಿವರು | :ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕಲ್ಯಾಣ ಕರ್ನಾಟಕ ಭಾಗದ ವಸತಿ ನಿಲಯಗಳಲ್ಲಿ ಹಾಸ್ಟೆಲ್ ವಾರ್ಡನ್ ಮತ್ತು ಹಾಸ್ಟೆಲ್ ಸೂಪರಿಂಟೆಂಡೆಂಟ್ ವೃಂದದ ಹುದ್ದೆಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಹೌದು.<br>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಒಟ್ಟು 2712 ಮೆಟ್ರಿಕ್ ಪೂರ್ವ / ಮೆಟ್ರಿಕ್ ನಂತರದ ಬಾಲಕರ / ಬಾಲಕಿಯರ ವಿದ್ಯಾರ್ಥಿ ನಿಲಯಗಳು ಮಂಜೂರಾಗಿರುತ್ತದೆ. ಸದರಿ ನಿಲಯಗಳಿಗೆ ಮಂಜೂರಾಗಿರುವ 2712 ನಿಲಯ ಪಾಲಕರು / ನಿಲಯ ಮೇಲ್ವಿಚಾರಕರ ಹುದ್ದೆಗಳ ಪೈಕಿ 1128 ಹುದ್ದೆಗಳು ಭರ್ತಿಯಾಗಿದ್ದು, 1584 ಹುದ್ದೆಗಳು ಖಾಲಿ ಇರುತ್ತದೆ. |
| ಆ | ವಿವಿಧ ವಸತಿ ನಿಲಯಗಳಲ್ಲಿ ಖಾಲಿ ಇರುವ ಹಾಸ್ಟೆಲ್‌ವಾರ್ಡನ್ ಮತ್ತು ಹಾಸ್ಟೆಲ್ ಸೂಪರಿಂಟೆಂಡೆಂಟ್ ಹುದ್ದೆಗಳು ಎಷ್ಟು ಸದರಿ ಹುದ್ದೆಗಳ ನೇರ ನೇಮಕಾತಿ ಕುರಿತು ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ: ಬಂದಿದ್ದಲ್ಲಿ. ಸರ್ಕಾರ ಕೈಗೊಂಡ ಕ್ರಮಗಳೇನು: | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಒಟ್ಟು 2712 ಮೆಟ್ರಿಕ್ ಪೂರ್ವ / ಮೆಟ್ರಿಕ್ ನಂತರದ ಬಾಲಕರ / ಬಾಲಕಿಯರ ವಿದ್ಯಾರ್ಥಿ ನಿಲಯಗಳು ಮಂಜೂರಾಗಿರುತ್ತದೆ. ಸದರಿ ನಿಲಯಗಳಿಗೆ ಮಂಜೂರಾಗಿರುವ 2712 ನಿಲಯ ಪಾಲಕರು / ನಿಲಯ ಮೇಲ್ವಿಚಾರಕರ ಹುದ್ದೆಗಳ ಪೈಕಿ 1128 ಹುದ್ದೆಗಳು ಭರ್ತಿಯಾಗಿದ್ದು, 1584 ಹುದ್ದೆಗಳು ಖಾಲಿ ಇರುತ್ತದೆ.<br>ಖಾಲಿ ಇರುವ 1584 ನಿಲಯ ಮೇಲ್ವಿಚಾರಕರ ಹುದ್ದೆಗಳ ಪೈಕಿ 386 (ಉಳಿಕೆ ಮೂಲವೃಂದ 280 + 106 ಕಲ್ಯಾಣ ಕರ್ನಾಟಕ ವೃಂದ) ನಿಲಯ ಮೇಲ್ವಿಚಾರಕರ ಹುದ್ದೆಗಳ ಭರ್ತಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು ನೇಮಕಾತಿ ಪ್ರಕ್ರಿಯ ಚಾಲನೆಯಲ್ಲಿರುತ್ತದೆ.<br>ಉಳಿದಂತೆ, ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ 732 ( ಉಳಿಕೆ ಮೂಲವೃಂದ- 655 + 77 ಕಲ್ಯಾಣ ಕರ್ನಾಟಕ ವೃಂದ) ನಿಲಯ ಮೇಲ್ವಿಚಾರಕರ ಹುದ್ದೆ ಭರ್ತಿಯ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ. . |
| | ಯಾವ ಕಾಲಮಿತಿಯಲ್ಲಿ ಈ ಹುದ್ದೆಗಳ ನೇಮಕಾತಿಯನ್ನು ಪೂರ್ಣಗೊಳಸಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು) | ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ದಿನಾಂಕ: 23.06.2026 ರಂದು ಪ್ರಸ್ತಾವನೆ ಸಲ್ಲಿಸಲಾಗಿದೆ. ಅಂತಿಮ ಆಯ್ಕೆ ಪಟ್ಟಿ ನಿರೀಕ್ಷಿಸಲಾಗಿದೆ. |

**ಸಂಖ್ಯೆ:ಹಿಂವಕ 194 ಬಿಇಟಿ 2026**

**(ಶಿವರಾಜ ಎಸ್. ತಂಗಡಗಿ)**
**ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ**
**ಕನ್ನಡ ಮತ್ತು ಸಂಸ್ಕೃತಿ ಸಚಿವರು**